## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 702(621) |
| 2 | ಮಾನ್ಯ ಸದಸ್ಯರ ಹೆಸರು | : | ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸಬೇಕಾದ ದಿನಾಂಕ | : | 18.08.2025 |
| 4 | ಉತ್ತರಿಸುವ ಸಚಿವರು | : | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ ಜಿಲ್ಲೆಯಲ್ಲಿ ಕೆಲವು ತಿಂಗಳ ಹಿಂದೆ ಹೃದ್ರೋಗಿಗಳಿಗೆ ಅನುಕೂಲವಾಗುವ ದೃಷ್ಟಿಯಿಂದ ಉದ್ಘಾಟನೆಯಾದ ಬ್ರಿಮ್ಸ್ ಆಸ್ಪತ್ರೆಯಲ್ಲಿ ಕ್ಯಾಥ ಲ್ಯಾಬ್ (ಸೂಪರ್ ಸ್ಪೆಷಾಲಿಟಿ ಹೃದ್ರೋಗ ಘಟಕ) ಇನ್ನೂ ಕಾರ್ಯಾರಂಭ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮವೇನು: | ಸರ್ಕಾರದ ಆದೇಶ ಸಂಖ್ಯೆ:ಎಂಇಡಿ 638 ಎಂಎಸ್‌ಎಫ್ 2023 ದಿನಾಂಕ:03.09.2024 ರನ್ವಯ ಒಟ್ಟು 14 ಹುದ್ದೆಗಳನ್ನು (12-ಹುದ್ದೆಗಳನ್ನು ಮರು ಹೊಂದಾಣಿಕೆ ಮಾಡಿ ಮತ್ತು 02 ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲು) ಸೃಜನೆ ಮಾಡಿ ಆದೇಶಿಸಲಾಗಿರುತ್ತದೆ. (ಅನುಬಂಧ-1)<br><br>ಸರ್ಕಾರದ ಆದೇಶದಂತೆ ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯು ಸದರಿ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲು ದಿನಾಂಕ:12.11.2024 ರಂದು ನೇರ ಸಂದರ್ಶನ ನಡೆಸಿ, 06-ಶುಶ್ರೂಷಕ ಅಧಿಕಾರಿ ಮತ್ತು 01-ಅರವಳಿಕೆ ತಂತ್ರಜ್ಞರನ್ನು ನೇಮಕಾತಿ ಮಾಡಿಕೊಂಡಿರುತ್ತಾರೆ.<br><br>ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಹೃದ್ರೋಗ ಘಟಕವು ದಿನಾಂಕ 16.04.2025ರಂದು ಉದ್ಘಾಟನೆ ಮಾಡಲಾಗಿರುತ್ತದೆ.<br><br>ಖಾಲಿ ಉಳಿದ ಇತರೆ ಹುದ್ದೆಗಳನ್ನು ಭರ್ತಿ ಮಾಡಲು ದಿನಾಂಕ:04.08.2025 ಅಧಿಸೂಚನೆ ಹೊರಡಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ.<br><br>ಮುಂದುವರೆದು, ಕಾರ್ಡಿಯಾಕ್ ಘಟಕವನ್ನು ಪ್ರಾರಂಭ ಮಾಡುವ ದೃಷ್ಟಿಯಿಂದ ಸಂಸ್ಥೆಯ ಸೇವೆಯಿಂದ ನಿವೃತ್ತಿ ಹೊಂದಿರುವ ಹಾಗೂ ಹೃದ್ರೋಗ ತಜ್ಞರಾದ ಡಾ: ರಾಜಶೇಖರ ಐ. ಕೌಜಲಗಿ, ಇವರನ್ನು ಸರ್ಕಾರದ ಆದೇಶ ಸಂಖ್ಯೆ:ಎಂಇಡಿ 193 ಎಂಎಸ್‌ಎಫ್ 2025, ದಿನಾಂಕ: 22.07.2025 ರಲ್ಲಿ ಎರಡು ವರ್ಷಗಳ ಅವಧಿಗೆ ಪುನರ್ ನೇಮಕ ಮಾಡಿಕೊಳ್ಳಲಾಗಿದೆ (ಅನುಬಂಧ-2). |
| (ಆ) | ಸದರಿ ಆಸ್ಪತ್ರೆಯಲ್ಲಿ ಸಿಬ್ಬಂದಿಗಳನ್ನು ನೇಮಕ ಮಾಡದೇ ಹೃದ್ರೋಗಿಗಳು ಸಾಕಷ್ಟು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗೂ ಜಿಲ್ಲೆಗೆ ತಜ್ಞ ವೈದ್ಯರನ್ನು ಯಾವಾಗ ನೇಮಕ ಮಾಡಲಾಗುವುದು? (ಮಾಹಿತಿ ನೀಡುವುದು) | |

| | | |
|---|---|---|
| | | ಡಾ. ಜಗದೀಶ, ಹೃದ್ರೋಗ ತಜ್ಞರು ಇವರನ್ನು ಕಾರ್ಡಿಯಾಲಾಜಿಸ್ಟ್ ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಂಡಿದ್ದು, ಸದರಿಯವರುಗಳು ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವುದನ್ನು ನಿರೀಕ್ಷಿಸಲಾಗಿದೆ.<br><br>ಸರ್ಕಾರದ ಪತ್ರ ಸಂಖ್ಯೆ:ಎಂಇಡಿ 408 ಎಂಎಸ್ ಎಫ್ 2025, ದಿನಾಂಕ:04.08.2025 ರಲ್ಲಿ ಬೀದರ್ ಕಾರ್ಡಿಯಾಕ್ ಘಟಕಕ್ಕೆ ಕಾರ್ಡಿಯಾಲಾಜಿಸ್ಟ್ ಹುದ್ದೆಯನ್ನು ಖಾಯಂ ಆಗಿ ನೇಮಕಾತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ (ಅನುಬಂಧ-3).<br><br>ಹೃದ್ರೋಗ ತಜ್ಞರು ಕರ್ತವ್ಯಕ್ಕೆ ವರದಿ ಮಾಡಿಕೊಂಡ ಕೂಡಲೇ ಘಟಕವನ್ನು ಆದ್ಯತೆ ಮೇರೆಗೆ ಪ್ರಾರಂಭಿಸಲಾಗುವುದು. |

**ಸಂಖ್ಯೆ:ಎಂಇಡಿ 442 ಎಂಎಸ್ಎಫ್ 2025**

**(ಡಾ. ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ,ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು

ಅನುಬಂಧ - ೧

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ ಇಲ್ಲಿ ಕ್ಯಾಥಲಾಬ್ ಸೌಲಭ್ಯದೊಂದಿಗೆ ಸ್ಥಾಪಿಸಲಾಗಿರುವ ಹೃದ್ರೋಗ ಚಿಕಿತ್ಸ ಘಟಕಕ್ಕೆ ಹುದ್ದೆಗಳನ್ನು ಸೃಜಿಸುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ:ಆಕುಕ 266 ಎಂಪಿಎಸ್ 2006, ದಿನಾಂಕ:12.09.2006.
2. ಸರ್ಕಾರದ ಆದೇಶ ಸಂಖ್ಯೆ:ಆಕುಕ 216 ಎಂಎಸ್ಎಫ್ 2015, ದಿನಾಂಕ:20.01.2016.
3. ಸರ್ಕಾರದ ಆದೇಶ ಸಂಖ್ಯೆ:ಆಕುಕ 242 ಎಂಎಸ್ಎಫ್ 2018, ದಿನಾಂಕ:11.10.2018.
4. ನಿರ್ದೇಶಕರು, ಬೀದರ್ ವೈದ್ಯಕಿಯ ವಿಜ್ಞಾನಗಳ ಸಂಸ್ಥೆ, ಬೀದರ್ ಇವರ ಏಕ ಕಡತ ಸಂಖ್ಯೆ:BRIMS-ADMN0DEV/14/2023-DIR.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರ ಸೇರ್ಪಡೆ ಆದೇಶದಲ್ಲಿ, ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ ಸಂಸ್ಥೆಯ ಸೇರಿದಂತೆ ಹೊಸದಾಗಿ ಸ್ಥಾಪಿಸಲಾಗಿರುವ ಆರು ವೈದ್ಯಕೀಯ ಕಾಲೇಜುಗಳಿಗೆ ಅವಶ್ಯವಿರುವ ವಿವಿಧ ವೃಂದದ ಹುದ್ದೆಗಳನ್ನು ಸೃಜಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ(2)ರ ಆದೇಶದಲ್ಲಿ ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ ಇಲ್ಲಿ ಎಂಸಿಐ ನಿಯಮಾಳ್ವಿಗಳ ಅನ್ವಯ ಹೆಚ್ಚುವರಿ 15 ಸೀನಿಯರ್ ರೆಸಿಡೆಂಟ್ ಹುದ್ದೆಗಳನ್ನು ಸೃಜಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (3)ರ ಆದೇಶದಲ್ಲಿ ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ ಇಲ್ಲಿ ಕ್ಯಾಥಲಾಬ್ ಸೌಲಭ್ಯದೊಂದಿಗೆ ಹೃದ್ರೋಗ ಚಿಕಿತ್ಸ ಘಟಕವನ್ನು ಸ್ಥಾಪಿಸಲು ಅನುಮತಿ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (4)ರ ಏಕ ಕಡತದಲ್ಲಿ, ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಬೀದರ್ ಇಲ್ಲಿನ ಕ್ಯಾಥಲಾಬ್ ಸೌಲಭ್ಯದೊಂದಿಗೆ ಹೃದ್ರೋಗ ಚಿಕಿತ್ಸಾ ಘಟಕವನ್ನು ನಿರ್ವಹಿಸಲು ಅವಶ್ಯವಿರುವ ಈ ಕೆಳಕಂಡ ವಿವಿಧ ವೃಂದದ ಹುದ್ದೆಗಳನ್ನು ಸೃಜಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

| ಕ್ರ.ಸಂ | ಹುದ್ದೆಗಳು | ಅವಶ್ಯವಿರುವ ಹುದ್ದೆಗಳ ಸಂಖ್ಯೆ |
|---|---|---|
| 1 | Cardiologist | 03 |
| 2 | Physician | 03 |
| 3 | DMO | 12 |

| | | |
|---|---|---|
| 4 | Anesthetist | 01 |
| 5 | Echo Technician | 03 |
| 6 | Cath. Lab Technician | 03 |
| 7 | Anesthesia Technician | 02 |
| 8 | X-Ray Technician | 01 |
| 9 | Lab Technician | 02 |
| 10 | Physiotherapist | 01 |
| 11 | Staff Nurse | 50 |
| 12 | Ward Helpers | 20 |
| 13 | MRD Technician | 01 |
| 14 | Data Entry Operator | 08 |
| 15 | Receptionist | 01 |
| 16 | SDA | 01 |

ಸರ್ಕಾರವು ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ ಇಲ್ಲಿನ ಕ್ಯಾಥಲಾಬ್ ಸೌಲಭ್ಯದೊಂದಿಗೆ ಹೃದ್ರೋಗ ಚಿಕಿತ್ಸಾ ಘಟಕವನ್ನು ನಿರ್ವಹಿಸಲು ಅವಶ್ಯವಿರುವ ವಿವಿಧ ವೃಂದದ ಹುದ್ದೆಗಳನ್ನು ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಸೀಮಿತವಾಗಿ ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ:ಆಕುಕ 266 ಎಂಪಿಎಸ್ 2006, ದಿನಾಂಕ:12.09.2006 ಹಾಗೂ ಸರ್ಕಾರದ ಆದೇಶ ಸಂಖ್ಯೆ:ಆಕುಕ 216 ಎಂಎಸ್‌ಎಫ್ 2015, ದಿನಾಂಕ:20.01.2016 ರಲ್ಲಿ ಸೃಜಿಸಲಾದ ಹುದ್ದೆಗಳಲ್ಲಿನ ವಿವಿಧ ವೃಂದದ ಹುದ್ದೆಗಳನ್ನು ಮರುಹೊಂದಾಣಿಕೆ / ಹೊಸದಾಗಿ ಸೃಜಿಸಲು ನಿರ್ಧರಿಸಿರುತ್ತದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಎಂಇಡಿ 638 ಎಂಎಸ್‌ಎಫ್ 2023,ದಿನಾಂಕ:03.09.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ ಇಲ್ಲಿನ ಕ್ಯಾಥಲಾಬ್ ಸೌಲಭ್ಯದೊಂದಿಗೆ ಹೃದ್ರೋಗ ಚಿಕಿತ್ಸಾ ಘಟಕವನ್ನು ನಿರ್ವಹಿಸಲು ಅವಶ್ಯವಿರುವ ವಿವಿಧ ವೃಂದದ ಹುದ್ದೆಗಳನ್ನು ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಸೀಮಿತವಾಗಿ ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ:ಆಕುಕ 266 ಎಂಪಿಎಸ್ 2006, ದಿನಾಂಕ:12.09.2006 ಹಾಗೂ ಸರ್ಕಾರದ ಆದೇಶ ಸಂಖ್ಯೆ:ಆಕುಕ 216 ಎಂಎಸ್‌ಎಫ್ 2015, ದಿನಾಂಕ:20.01.2016 ರಲ್ಲಿ ಸೃಜಿಸಲಾದ ಹುದ್ದೆಗಳಲ್ಲಿ ಈ ಕೆಳಕಂಡಂತೆ ವಿವಿಧ ವೃಂದದ ಹುದ್ದೆಗಳನ್ನು ಮರುಹೊಂದಾಣಿಕೆ / ಸೃಜನೆ ಮಾಡಿ ಆದೇಶಿಸಿದೆ.

| ಕ್ರ. ಸಂ. | ಹುದ್ದೆಗಳು | ಸಂಖ್ಯೆ | ಸೃಜನೆ / ಮರುಹೊಂದಾಣಿಕೆ |
|---|---|---|---|
| 1 | ಸಹ ಪ್ರಾಧ್ಯಾಪಕರು (ಮೆಡಿಸಿನ್) | 01 | ಮೆಡಿಸಿನ್ ವಿಭಾಗದ ಒಂದು ಹುದ್ದೆಯನ್ನು ಆಂತರಿಕವಾಗಿ Cardiology ವಿಭಾಗಕ್ಕೆ ಮರುಹೊಂದಾಣಿಕೆ ಮಾಡಿಕೊಳ್ಳುವುದು. |
| 2 | ಕಾರ್ಡಿಯಾಲಜಿಸ್ಟ್ (ಸಹಾಯಕ ಪ್ರಾಧ್ಯಾಪಕರು ವೃಂದ) | 01 | ಹೊಸದಾಗಿ ಸೃಜಿಸಿ, ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡುವುದು. |

| | | | |
|---|---|---|---|
| 3 | ಅನಸ್ತೇಷಿಯಾ/ಕ್ಯಾತಲ್ಯಾಬ್ ಟೆಕ್ನಿಷಿಯನ್/ಎಕೋ ಟೆಕ್ನಿಷಿಯನ್ | 03 | ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನೇ ಮರುಹೊಂದಾಣಿಕೆ ಮಾಡಿಕೊಳ್ಳುವುದು ಅಥವಾ ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡುವುದು |
| 4 | ಜ್ಯೂನಿಯರ್ ರೆಸಿಡೆಂಟ್/ಸೀನಿಯರ್ ರೆಸಿಡೆಂಟ್ | 02 | ಮರುಹೊಂದಾಣಿಕೆ ಮಾಡಿಕೊಂಡು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡುವುದು |
| 5 | ಸ್ಟಾಫ್ ನರ್ಸ್ | 06 | ಮರುಹೊಂದಾಣಿಕೆ ಮಾಡಿಕೊಂಡು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡುವುದು |
| 6 | Receptionist/DEO | 01 | ಹೊಸದಾಗಿ ಸೃಜಿಸಿ, ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡುವುದು |
| | **ಒಟ್ಟು** | **14** | |

ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 44 ವೆಚ್ಚ-5 2023, ದಿನಾಂಕ:22.02.2024 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

03/09/2024

**(ಆರ್. ಮಂಜುನಾಥ)**
ಸರ್ಕಾರದ ಅಧೀನ ಕಾರ್ಯದರ್ಶಿ-3,
ವೈದ್ಯಕೀಯ ಶಿಕ್ಷಣ ಇಲಾಖೆ.
03/09/2024

04/09/24

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್ಎ), ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು (ಜಿ & ಇ & ಆರ್‌ಎಸ್ಎ), ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
4. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬಿಎಂಸಿಆರ್‌ಐ ಹಳೇ ಕಟ್ಟಡ, ಕೆ.ಆರ್.ರಸ್ತೆ, ಬೆಂಗಳೂರು-560002.
5. ಉಪ ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು-560001.
6. ನಿರ್ದೇಶಕರು, ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-5), ವಿಧಾನಸೌಧ, ಬೆಂಗಳೂರು.
8. ಮುಖ್ಯ ಲೆಕ್ಕಾಧಿಕಾರಿ ಹಾಗೂ ಆರ್ಥಿಕ ಸಲಹೆಗಾರರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬಿಎಂಸಿಆರ್‌ಐ ಹಳೇ ಕಟ್ಟಡ, ಕೆ.ಆರ್.ರಸ್ತೆ, ಬೆಂಗಳೂರು-560002
9. ಯೋಜನಾಧಿಕಾರಿ, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬಿಎಂಸಿಆರ್‌ಐ ಹಳೇ ಕಟ್ಟಡ, ಕೆ.ಆರ್.ರಸ್ತೆ, ಬೆಂಗಳೂರು-560002.
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

ಅನುಬಂಧ - 02

/ 19

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಡಾ. ರಾಜಶೇಖರ ಕೌಜಲಗಿ, ಸಹ ಪ್ರಾಧ್ಯಾಪಕರು (ನಿವೃತ್ತ), ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ ಇವರನ್ನು ಎರಡು ವರ್ಷಗಳ ಅವಧಿಗೆ ಪುನರ್ ನೇಮಕ ಮಾಡಿಕೊಳ್ಳುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಆಕುಕ 242 ಎಂಎಸ್‌ಎಫ್ 2018, ದಿನಾಂಕ:11.10.2018.
2. ಸರ್ಕಾರದ ಆದೇಶ ಸಂಖ್ಯೆ:ಎಂಇಡಿ 638 ಎಂಎಸ್‌ಎಫ್ 2023 ದಿನಾಂಕ:03.09.2024
3. ನಿರ್ದೇಶಕರು, ಬೀದರ್ ವೈದ್ಯಕಿಯ ವಿಜ್ಞಾನಗಳ ಸಂಸ್ಥೆ, ಬೀದರ್ ಇವರ ಏಕ ಕಡತ ಸಂಖ್ಯೆ:ಇ-1726868.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರ ಆದೇಶದಲ್ಲಿ, ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ ಇಲ್ಲಿ ಕ್ಯಾಥಲಾಬ್ ಸೌಲಭ್ಯದೊಂದಿಗೆ ಹೃದ್ರೋಗ ಚಿಕಿತ್ಸ ಘಟಕವನ್ನು ಸ್ಥಾಪಿಸಲು ಅನುಮತಿ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ(2)ರ ಆದೇಶದಲ್ಲಿ ಬ್ರಿಮ್ಸ್‌ನ ಕ್ಯಾಥಲಾಬ್ ಸೌಲಭ್ಯವುಳ್ಳ ಹೃದ್ರೋಗ ಘಟಕಕ್ಕೆ ಅವಶ್ಯವಿರುವ ಸಹ ಪ್ರಾಧ್ಯಾಪಕರು (ಮೆಡಿಸನ್) ಹಾಗೂ ಕಾರ್ಡಿಯಾಲಜಿಸ್ಟ್ (ಸಹಾಯಕ ಪ್ರಾಧ್ಯಾಪಕರ ವೃಂದದ) ಹುದ್ದೆಗಳನ್ನು ಹೊಸದಾಗಿ ಸೃಜಿಸಲು / ಮರುಹೊಂದಾಣಿಕೆ ಮೂಲಕ ಭರ್ತಿ ಮಾಡಲು ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (3)ರ ಏಕಕಡತದಲ್ಲಿ, ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್‌ನ ಕ್ಯಾಥಲಾಬ್ ಸೌಲಭ್ಯವುಳ್ಳ ಹೃದ್ರೋಗ ಘಟಕಕ್ಕೆ ಸೃಜಿಸಿರುವ / ಮರುಹೊಂದಾಣಿಕೆ ಮಾಡಿರುವ ಸಹ ಪ್ರಾಧ್ಯಾಪಕರು (ಮೆಡಿಸನ್) ಹಾಗೂ ಕಾರ್ಡಿಯಾಲಾಜಿಸ್ಟ್ (ಸಹಾಯಕ ಪ್ರಾಧ್ಯಾಪಕ ವೃಂದ) ಹುದ್ದೆಗೆ ನೇಮಕ ಮಾಡಿಕೊಳ್ಳಲು ಅಧಿಸೂಚನೆ ಹೊರಡಿಸಿದ ಸಂದರ್ಭದಲ್ಲಿ ಅರ್ಹ ಅಭ್ಯರ್ಥಿಗಳು ಲಭ್ಯವಾಗದೇ ಇರುವುದರಿಂದ, ಸದರಿ ಹುದ್ದೆಗಳು ಭರ್ತಿ ಆಗಿರುವುದಿಲ್ಲವೆಂದು ತಿಳಿಸಿರುತ್ತಾರೆ.

ಮುಂದುವರೆದು, ಡಾ. ರಾಜಶೇಖರ ಕೌಜಲಗಿ, ಸಹ-ಪ್ರಾಧ್ಯಾಪಕರು(ನಿವೃತ್ತ) ಇವರು ವೈದ್ಯಕೀಯ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಾ ಸೇವಾ ನಿರತ ಕೋಟಾದಡಿಯಲ್ಲಿ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು ಇಲ್ಲಿ ಡಿ.ಎಂ ಕಾರ್ಡಿಯಾಲೋಜಿನಲ್ಲಿ 2015 ರಂದು ಉತ್ತೀರ್ಣರಾಗಿ ಕಾರ್ಯನಿರ್ವಹಿಸುತ್ತಿದ್ದು, ಇವರನ್ನು ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಕ್ಯಾಥಲಾಬ್ ಸೌಲಭ್ಯವುಳ್ಳ ಹೃದ್ರೋಗ ಘಟಕಕ್ಕೆ ಬೀದರ್ ಘಟಕದ ವಿಶೇಷಾಧಿಕಾರಿಯಾಗಿ ದಿನಾಂಕ:28.01.2020 ರಂದು ನೇಮಿಸಿ ಆದೇಶಿಸಲಾಗಿದ್ದು, ಅದರಂತೆ ಸದರಿಯವರು ದಿನಾಂಕ:01.03.2020 ರಿಂದ ವಿಶೇಷಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿ, ದಿನಾಂಕ:30.04.2025 ರಂದ ವಯೋನಿವೃತ್ತಿ ಹೊಂದಿರುತ್ತಾರೆ. ಆದ್ದರಿಂದ, ಸದರಿಯವರನ್ನು ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ ಕ್ಯಾಥಲಾಬ್ ಸೌಲಭ್ಯವುಳ್ಳ

Jyothishwara.T 22/7/2025

ಹೃದ್ರೋಗ ಘಟಕಕ್ಕೆ ಸೃಜಿಸಿರುವ/ ಮರುಹೊಂದಾಣಿಕೆ ಮಾಡಿರುವ ಸಹ ಪ್ರಾಧ್ಯಾಪಕರು (ಮೆಡಿಸನ್) ಹುದ್ದೆಗೆ ಕರ್ನಾಟಕ ನಾಗರಿಕ ಸೇವಾ ನಿಯಮಗಳ ನಿಯಮ 313 ರನ್ವಯ ಎರಡು ವರ್ಷಗಳ ಅವಧಿಗೆ ಪುನರ್ ನೇಮಕ ಮಾಡಿಕೊಳ್ಳಲು ಕೋರಿ ನಿರ್ದೇಶಕರು, ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ ಇವರು ಏಕಕಡತದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸರ್ಕಾರವು ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ ಕ್ಯಾಥಲಾಬ್ ಸೌಲಭ್ಯವುಳ್ಳ ಹೃದ್ರೋಗ ಘಟಕಕ್ಕೆ ಸೃಜಿಸಿರುವ / ಮರುಹೊಂದಾಣಿಕೆ ಮಾಡಿರುವ ಸಹ ಪ್ರಾಧ್ಯಾಪಕರು (ಮೆಡಿಸನ್) ಹುದ್ದೆಗೆ ಡಾ. ರಾಜಶೇಖರ ಕೌಜಲಗಿ, ಸಹ ಪ್ರಾಧ್ಯಾಪಕರು (ನಿವೃತ್ತಿ) ಇವರನ್ನು ಕರ್ನಾಟಕ ನಾಗರಿಕ ಸೇವಾ ನಿಯಮಗಳ ನಿಯಮ 313 ರನ್ವಯ ಎರಡು ವರ್ಷಗಳ ಅವಧಿಗೆ ಪುನರ್ ನೇಮಕ ಮಾಡಿಕೊಳ್ಳಲು ಸರ್ಕಾರವು ನಿರ್ಧರಿಸಿರುತ್ತದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಎಂಇಡಿ 193 ಎಂಎಸ್‌ಎಫ್ 2025, ಬೆಂಗಳೂರು,**
**ದಿನಾಂಕ: 22.07.2025**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ ನ ಕ್ಯಾಥಲಾಬ್ ಸೌಲಭ್ಯವುಳ್ಳ ಹೃದ್ರೋಗ ಘಟಕಕ್ಕೆ ಸೃಜಿಸಿರುವ / ಮರುಹೊಂದಾಣಿಕೆ ಮಾಡಿರುವ ಸಹ ಪ್ರಾಧ್ಯಾಪಕರು (ಮೆಡಿಸನ್) ಹುದ್ದೆಗೆ ಡಾ. ರಾಜಶೇಖರ ಕೌಜಲಗಿ, ಸಹ ಪ್ರಾಧ್ಯಾಪಕರು (ನಿವೃತ್ತಿ) ಇವರನ್ನು ಕರ್ನಾಟಕ ನಾಗರಿಕ ಸೇವಾ ನಿಯಮಗಳ ನಿಯಮ 313 ರನ್ವಯ ಎರಡು ವರ್ಷಗಳ ಅವಧಿಗೆ ಪುನರ್ ನೇಮಕ ಮಾಡಿ ಆದೇಶಿಸಿದೆ.

ಸದರಿಯವರನ್ನು ಮುಂದುವರೆಸಲು ಅಗತ್ಯವಿರುವ ವೆಚ್ಚವನ್ನು ಆಯವ್ಯಯದಲ್ಲಿ ಸಂಸ್ಥೆಗೆ ಒದಗಿಸುವ ಅನುದಾನದಿಂದ ಭರಿಸತಕ್ಕದ್ದು.

ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 44 ವೆಚ್ಚ-05 /2024, ದಿನಾಂಕ:11-06-2025 ರಲ್ಲಿ ನೀಡಿರುವ ಅಭಿಪ್ರಾಯ ಹಾಗೂ ಸಚಿವ ಸಂಪುಟವು ಪ್ರಕರಣ ಸಂಖ್ಯೆ:ಸಿ-482/2025, ದಿನಾಂಕ:17.07.2025 ರಲ್ಲಿ ನೀಡಿರುವ ಅನುಮೋದನೆಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)
ಪತ್ರ ಸ್ವೀಕರಿಸುವ ಶಾಖೆ – ಪತ್ರ ಹೊರಡಿಸುವ
ದಿನಾಂಕ: 23/07/25
ಸಹಿ:

Jyothishree T 22/7/2025
(ಜ್ಯೋತಿಶ್ರೀ ಟಿ.)
ಸರ್ಕಾರದ ಅಧೀನ ಕಾರ್ಯದರ್ಶಿ-3(ಪ್ರ),
ವೈದ್ಯಕೀಯ ಶಿಕ್ಷಣ ಇಲಾಖೆ.

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ), ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.

2) ಪ್ರಧಾನ ಮಹಾಲೇಖಪಾಲರು (ಜಿ & ಇ & ಆರ್‌ಎಸ್‌ಎ), ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.
3) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
4) ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬಿಎಂಸಿಆರ್‌ಐ, ಹಳೇ ಕಟ್ಟಡ, ಕೆ.ಆರ್.ರಸ್ತೆ, ಬೆಂಗಳೂರು-560002.
5) ನಿರ್ದೇಶಕರು, ಬೀದರ್ ವೈದ್ಯಕೀಯ ವಿಜ್ಞಾನ ಗಳ ಸಂಸ್ಥೆ, ಬೀದರ್.
6) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-5), ವಿಧಾನಸೌಧ, ಬೆಂಗಳೂರು.
7) ಮುಖ್ಯ ಲೆಕ್ಕಾಧಿಕಾರಿ ಹಾಗೂ ಆರ್ಥಿಕ ಸಲಹೆಗಾರರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬಿಎಂಸಿಆರ್‌ಐ, ಹಳೇ ಕಟ್ಟಡ, ಕೆ.ಆರ್.ರಸ್ತೆ, ಬೆಂಗಳೂರು-560002
8) ಸಂಬಂಧಿಸಿದ ಅಧಿಕಾರಿಗೆ (ನಿರ್ದೇಶಕರು, ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ ಇವರ ಮುಖಾಂತರ)
9) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**<u>ಪ್ರತಿ ಮಾಹಿತಿಗಾಗಿ:</u>**

1. ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

ಅನುಬಂಧ -03

ಕರ್ನಾಟಕ ಸರ್ಕಾರ

**ಸಂಖ್ಯೆ:**ಎಂಇಡಿ 408 ಎಂಎಸ್‌ಎಫ್ 2025

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:04.08.2025.

**ಇಂದ,**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ವೈದ್ಯಕೀಯ ಶಿಕ್ಷಣ ಇಲಾಖೆ,
ಬೆಂಗಳೂರು.

**ಇವರಿಗೆ,**
ನಿರ್ದೇಶಕರು,
ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ
ಬೀದರ್.

**ಮಾನ್ಯರೆ,**

**ವಿಷಯ:** ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಕ್ಯಾಥಲಾಬ್ ಘಟಕಕ್ಕೆ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು.

**ಉಲ್ಲೇಖ:** ತಮ್ಮ ಸಂಸ್ಥೆಯ ಪತ್ರ ಸಂಖ್ಯೆ:ಬೀವೈವಿಸಂ/ಅಭಿವೃದ್ಧಿ/ಸಿ.ಆರ್/2025-26/226, ದಿನಾಂಕ:17.07.2025.

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ತಮ್ಮ ಪತ್ರದಲ್ಲಿನ ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಬೀದರ್ ಕಾರ್ಡಿಯಾಕ್ ಘಟಕಕ್ಕೆ ಅವಶ್ಯವಿರುವ ಹುದ್ದೆಗಳನ್ನು ಈ ಕೆಳಕಂಡಂತೆ ಭರ್ತಿ ಮಾಡಲು ಅನುಮತಿ ನೀಡಿದೆ ಎಂದು ತಮಗೆ ತಿಳಿಸಲು ನಿರ್ದೇಶಿಸಲ್ಪಟ್ಟಿದೇನೆ.

| ಕ್ರ. ಸಂ | ಹುದ್ದೆಯ ಪದನಾಮ | ಆರ್ಥಿಕ ಇಲಾಖೆಯು ಭರ್ತಿ ಮಾಡಿಕೊಳ್ಳಲು ಸಹಮತಿಸಿದ ಹುದ್ದೆಗಳ ಸಂಖ್ಯೆ | ನೇಮಕಾತಿ ವಿಧಾನ |
|---|---|---|---|
| 1 | Cardiologist | 01 | ನೇರ ನೇಮಕಾತಿ / ಗುತ್ತಿಗೆ ಆಧಾರದ ಮೇಲೆ (*) |
| 2 | Senior Resident | 01 | ಕಡ್ಡಾಯ ಗ್ರಾಮೀಣ ಸೇವೆಯ ಮೂಲಕ |
| 3 | Junior Resident | 01 | ಕಡ್ಡಾಯ ಗ್ರಾಮೀಣ ಸೇವೆಯ ಮೂಲಕ |
| 4 | Cathlab Technician | 01 | ಗುತ್ತಿಗೆ ಆಧಾರದ ಮೇಲೆ |
| 5 | Echo Technician | 01 | ಗುತ್ತಿಗೆ ಆಧಾರದ ಮೇಲೆ |
| | **ಒಟ್ಟು** | **05** | |

(*) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಹೊರಡಿಸಿರುವ ಸುತ್ತೋಲೆ ಸಂಖ್ಯೆ:ಸಿಆಸುಇ 388 ಸೇನನಿ 2024, ದಿನಾಂಕ:25.11.2024 ರಲ್ಲಿ ನೇರ ನೇಮಕಾತಿ ಮೂಲಕ

ಹುದ್ದೆಗಳ ಭರ್ತಿ ಪ್ರಸ್ತಾವನೆಗಳಿಗೆ ಸಂಬಂಧಿಸಿದಂತೆ ವಿಧಿಸಿರುವ ನಿರ್ಬಂಧವನ್ನು ಹಿಂಪಡೆದ/ತೆರವುಗೊಳಿಸಿದ ನಂತರ ಕ್ರಮವಹಿಸುವುದು.

ತಮ್ಮ ವಿಶ್ವಾಸಿ,

Jyothishree T 04/8/2025

**(ಜ್ಯೋತಿಶ್ರೀ ಟಿ)**
ಸರ್ಕಾರದ ಅಧೀನ ಕಾರ್ಯದರ್ಶಿ-3(ಪ್ರ),
ವೈದ್ಯಕೀಯ ಶಿಕ್ಷಣ ಇಲಾಖೆ.

04/08

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
( ವೈದ್ಯಕೀಯ ಶಿಕ್ಷಣ )
ಪತ್ರ ಸ್ವೀಕರಿಸಿದ ಶಾಖೆ - ಪತ್ರ ಹೊರಹೋದ
ದಿನಾಂಕ: 06/08/25
ಸಂ: